**MVC 569/2021  RW-2**

(ಇಂದು ದಿನಾಂಕಃ 23-01-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು)

**ಮುಖ್ಯ ವಿಚಾರಣೆಃ ಶ್ರೀ. V.V.C ಎದುರುದಾರರ ಪರ ವಕೀಲರಿಂದಃ**

1. ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಂತಹ ವಿಷಯಗಳು ಸರಿಯಾಗಿವೆ. ಅದನ್ನು ನಾನೇ ಹೇಳಿ ಬರೆಸಿದ್ದೇನೆ.

1. ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಆರ್-1 ಎಂದು, ಗುರುತಿಸಲಾಯಿತು.
2. ಗಣಕೀಕೃತ ವಿಮಾ ಪಾಲಿಸಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಆರ್-2 ಎಂದು, ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ. C.S ಅರ್ಜಿದಾರ ಪರ ವಕೀಲರಿಂದಃ**

ಈ ಅಪಘಾತದ ಘಟನೆಯಲ್ಲಿ ಇಬ್ಬರು ವ್ಯಕ್ತಿಗಳು ಮೃತ ಹೊಂದಿರುತ್ತಾರೆ ಎಂದರೆ ಸರಿ. ಇಬ್ಬರು ವ್ಯಕ್ತಿಗಳ ವಾರಸುದಾರರು ಒಂದು ಪ್ರಕರಣವನ್ನು ಈ ನ್ಯಾಯಾಲಯದಲ್ಲಿ ಇನ್ನೊಂದು ಪ್ರಕರಣವನ್ನು ಕಲಬುರಗಿಯ ನ್ಯಾಯಾಲಯದಲ್ಲಿ ದಾಖಲಿಸಿರುತ್ತಾರೆ ಎಂದರೆ ನನಗೆ ಈ ಪ್ರಕರಣ ದಾಖಲಿಸಿದ ಬಗ್ಗೆ ಮಾತ್ರ ಗೊತ್ತು. ಕಲಬುರಗಿ ನ್ಯಾಯಾಲಯದಲ್ಲಿ ದಾಖಲಿಸಿದ ಪ್ರಕರಣ ಸಂಖ್ಯೆ 1143/2020 ಇರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಅದು 11-08-2023 ರಂದು ಅಂತಿಮ ಆದೇಶ ಆಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಆ ಆದೇಶದ ಪಾಲನೆಯನ್ನು ನಮ್ಮ ಹಿರಿಯ ಅಧಿಕಾರಿಗಳು ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಅಪಘಾತವಾದಾಗ ಪಾಲಿಸಿ ಚಾಲನೆಯಲ್ಲಿ ಇತ್ತು ಎಂದರೆ ಸರಿ. ನನ್ನ ಮುಖ್ಯ ವಿಚಾರಣೆಯಲ್ಲಿ ಅಲ್ಲಗಳೆದ ಅಂತಿಮ ದೋಷಾರೋಪಣ ಸಂಗತಿಗಳ ಕುರಿತು ಮೇಲ್ಮನವಿಯನ್ನು ಸಲ್ಲಿಸಿಲ್ಲ ಎಂದರೆ ಸರಿ. ಆದರೆ ನಾವು ಕ್ರಿಮಿನಲ್ ನ್ಯಾಯಾಲಯದಲ್ಲಿ ಅಪಘಾತ ಕುರಿತು ನಡೆದ ಪ್ರಕರಣದಲ್ಲಿ ಪಕ್ಷಗಾರರಾಗಿ ಇರುವುದಿಲ್ಲ. ನಮ್ಮ ಗಮನಕ್ಕೆ ಬಂದಾಗಿನಿಂದಲೂ ಅಪಘಾತದ ಸತ್ಯಾಸತ್ಯತೆಯ ಕುರಿತು ಇವತ್ತಿನವರೆಗೂ ಮೇಲ್ಮನವಿಯನ್ನು ಸಲ್ಲಿಸಿಲ್ಲ ಎಂದರೆ ಸರಿ. ಅರ್ಜಿದಾರರಿಗೆ ವಿಮಾ ಪರಿಹಾರವನ್ನು ಕೊಡಬಾರದು ಅನ್ನುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರವನ್ನು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ನಮೂದಿಸಿದ ಸಂಗತಿಗಳು ಸುಳ್ಳಿನಿಂದ ಕೂಡಿವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಜೆ.ಎಮ್. ಎಫ್. ಸಿ,
ಚಿಂಚೋಳಿ.